ಮಾಗಡಿ ಪಟ್ಟಣದಲ್ಲಿ ಆಸ್ಪತ್ರೆಯ ನಿರ್ಮಾಣ

೮೦೪. **ಶ್ರೀ ಹೆಚ್. ಎಂ. ರೇವಣ್ಣ** (ಮಾಗಡಿ).— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಮಾಗಡಿ ಪಟ್ಟಣದಲ್ಲಿ ೫೦ ಹಾಸಿಗೆಗಳ ಸರ್ಕಾರಿ ಆಸ್ಪತ್ರೆಯ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರವು ತೆಗೆದುಕೊಂಡ ಕ್ರಮಗಳೇನು ?

ಶ್ರೀಮತಿ ಮನೋರಮಾ ಮಧ್ವರಾಜ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು).—

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಶ್ರೀ ಹೆಚ್. ಎಂ. ರೇವಣ್ಣ.— ಉತ್ತರದಲ್ಲಿ ಮಾಗಡಿ ಟೌನಿನಲ್ಲಿ ೫೦ ಹಾಸಿಗೆಯುಳ್ಳ ಸರ್ಕಾರಿ ಆಸ್ಪತ್ರೆಯ ಅವಶ್ಯಕತೆ ಇದೆಯೇ ಎಂದು ಕೇಳಿದ್ದಕ್ಕೆ 'ಇಲ್ಲ' ಎಂದು ತಿಳಿಸಿದ್ದಾರೆ. ಆದರೆ ಮಾಗಡಿ ಟೌನಿನಲ್ಲಿ ಸರ್ಕಾರಿ ಆಸ್ಪತ್ರೆಯ ಕೆಲಸ ನಡೆಯುತ್ತಿದೆ. ಇದು ಸಚಿವರ ಗಮನಕ್ಕೆ ಬಂದಿಲ್ಲ ಎಂದು ಕಾಣುತ್ತದೆ. ಅವರನ್ನು ನಾನು ಕೇಳಿಕೊಳ್ಳುವುದೇನೆಂದರೆ ಈ ಕಾರ್ಯ ಇನ್ನೂ ತಳಪಾಯದ ಮಟ್ಟದಲ್ಲಿದೆ. ಆದಷ್ಟು ಜಾಗ್ರತೆ ವಹಿಸುವುದಕ್ಕೆ ಸಚಿವರು ಕ್ರಮ ತೆಗೆದುಕೊಳ್ಳುತ್ತಾರೆಯೇ ?

ಶ್ರೀಮತಿ ಮನೋರಮಾ ಮಧ್ವರಾಜ್.— ಕಟ್ಟಡಕ್ಕಾಗಿ ೩೮ ಲಕ್ಷ ರೂಪಾಯಿಗಳು ಮಂಜೂರಾಗಿದ್ದು ತಾಂತ್ರಿಕ ಮಂಜೂರಾತಿ ಕೊಟ್ಟಿರುತ್ತಾರೆ, ಈಗಾಗಲೇ ೮.೭೪.೦೦೦ ರೂಪಾಯಿಗಳು ತಳಪಾಯಕ್ಕಾಗಿ ಖರ್ಚಾಗಿದೆ. ಆದಷ್ಟು ಶೀಘ್ರವಾಗಿ ಹಣದ ಲಭ್ಯತೆಯನ್ನು ನೋಡಿಕೊಂಡು ಈ ಕಟ್ಟಡವನ್ನು ಪೂರ್ಣಗೊಳಿಸುವುದಕ್ಕೆ ಪ್ರಯತ್ನ ಮಾಡುತ್ತೇನೆ.

ಶ್ರೀ ಹೆಚ್. ಎಂ. ರೇವಣ್ಣ.— ತಪ್ಪು ಮಾಹಿತಿಯನ್ನು ನೀಡಿದ್ದೀರಲ್ಲಾ.

ಅಧ್ಯಕ್ಷರು.— ಮಾಗಡಿ ಪಟ್ಟಣದಲ್ಲಿ ೫೦ ಹಾಸಿಗೆಗಳ ಸರ್ಕಾರಿ ಆಸ್ಪತ್ರೆಯ ಅವಶ್ಯಕತೆಯಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ? ಎಂದು ಮಾನ್ಯ ಸದಸ್ಯರು ಕೇಳಿದ್ದಾರೆ.

ಶ್ರೀಮತಿ ಮನೋರಮಾ ಮಧ್ವರಾಜ್.— ಅದಕ್ಕೆ ಉತ್ತರ ಕೊಟ್ಟಿದ್ದೇನೆ.

ಜಿಲ್ಲಾ ಪರಿಷತ್ತುಗಳ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳಿಗೆ ತಗಲಿದ ವಾರ್ಷಿಕ ವೆಚ್ಚ

೫೭೧. **ಶ್ರೀ ವೈ. ಎಂ. ವೀರಣ್ಣ** (ದಾವಣಗೆರೆ).— ಮಾನ್ಯ ಗ್ರಾಮೀಣಾಭಿವೃದ್ಧಿ, ಪಂಚಾಯತ್‌ರಾಜ್, ವಾರ್ತಾ ಮತ್ತು ಪ್ರಚಾರ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸಿಂವರೆ ?

ಅ) ಕರ್ನಾಟಕ ರಾಜ್ಯದಲ್ಲಿರುವ ಜಿಲ್ಲಾ ಪರಿಷತ್ತುಗಳ ಅಧ್ಯಕ್ಷರು ಮತ್ತು ಉಪಾಧ್ಯಕ್ಷರುಗಳು ೧೯೮೯-೯೦ನೇ ಸಾಲಿಗೆ ಮಾಡಿರುವ ಪ್ರವಾಸ, ದೂರವಾಣಿ, ಮನೆ ಬಾಡಿಗೆ ಮತ್ತಿತರೆ ಸೌಲಭ್ಯಗಳ ವಾರ್ಷಿಕ ವೆಚ್ಚವೆಷ್ಟು ವಿವರಗಳನ್ನೊದಗಿಸುವುದು.

ಆ) ಈ ವೆಚ್ಚವನ್ನು ಮಿತಿಗೊಳಿಸಲು ಸರ್ಕಾರದವರು ಕೈಗೊಂಡ ಕ್ರಮವೇನು ?

ಶ್ರೀ ಎಂ. ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ, ಪಂಚಾಯತ್‌ರಾಜ್, ವಾರ್ತಾ ಮತ್ತು ಪ್ರಚಾರ ಮಂತ್ರಿಗಳು).—

ಅ) ಅನುಬಂಧ 'ಅ' ಮತ್ತು 'ಆ' ನಲ್ಲಿ ಕೊಡಲಾಗಿದೆ.

ಆ) ಇಲ್ಲ.